ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 28–09–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕೃಷಿ ಕಾರ್ಯಾಗಾರ:<br>ಉದ್ಘಾಟನೆ:<br>ಕೃಷ್ಣಭೈರೇಗೌಡ,<br>ರಾಜ್ಯ ಕೃಷಿ ಸಚಿವರು | 29–9–2015<br>ಮಂಗಳವಾರ<br>ಬೆಳಿಗ್ಗೆ<br>10–30 ಗಂಟೆಗೆ | ಸಮೃದ್ಧಿ ಸಭಾಂಗಣ,<br>ಕೃಷಿ ಆಯುಕ್ತರ ಕಾರ್ಯಾಲಯದ ಆವರಣ,<br>ನಂ 1, ಶೇಷಾದ್ರಿ ರಸ್ತೆ,<br>ಬೆಂಗಳೂರು – 560 001 |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಕೃತಿಯ ಸಮರ್ಪಣಾ ಸಮಾರಂಭ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ)

ಕನ್ನಡ ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಬಿ.ಜಿ. ನಂದಕುಮಾರ್ ಅವರು ಬರೆದಿರುವ ನಂದಾವಲೋಕನ ಆಡಳಿತಾನುಭವದ ಅಪೂರ್ವ ಕ್ಷಣಗಳು ಕೃತಿಯ ಸಮರ್ಪಣಾ ಸಮಾರಂಭವನ್ನು ಸೆಪ್ಟೆಂಬರ್ 30 ರಂದು ಸಂಜೆ 6–30 ಗಂಟೆಗೆ ನಗರದ ಕಬ್ಬನ್ ಪಾರ್ಕ್‌ನ ಸೆಂಚುರಿ ಕ್ಲಬ್‌ನ ಒಡೆಯರ್ ಸಭಾಂಗಣದಲ್ಲಿ ಹಮ್ಮಿಕೊಂಡಿದೆ.

ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದ ಮಹಾಸ್ವಾಮೀಜಿಯವರ ಸಮ್ಮುಖದಲ್ಲಿ ಸಮಾರಂಭ ನಡೆಯಲಿದೆ. ಕರ್ನಾಟಕ ವಿಧಾನ ಪರಿಷತ್‌ನ ಗೌರವಾನ್ವಿತ ಸಭಾಪತಿಗಳು ಕೃತಿಯನ್ನು ಲೋಕಾರ್ಪಣೆ ಮಾಡುವರು.

ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮೂಲಸೌಕರ್ಯ ಅಭಿವೃದ್ಧಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವ ಆರ್. ರೋಷನ್ ಬೇಗ್, ಕನ್ನಡ ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಶ್ರೀಮತಿ ಉಮಾಶ್ರೀ, ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ರಾಜೇಂದ್ರಸಿಂಗ್ ಬಾಬು ಹಾಗೂ ಖ್ಯಾತ ಚಲನಚಿತ್ರ ನಟಿ ಶ್ರೀಮತಿ ಭಾರತಿ ವಿಷ್ಣುವರ್ಧನ್ ಅವರು ಸಮಾರಂಭದಲ್ಲಿ ಉಪಸ್ಥಿತರಿರುವರು.

ಪಲ್ಲವಿ:ಜಿಪಿಆರ್

## ಅಧ್ಯಕ್ಷರ ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ)**

ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸುಭಾಸ ಎಸ್. ಛಾಯಾಗೋಳ ಅವರು ಸೆಪ್ಟೆಂಬರ್ 29 ರಂದು ಗೋವಾದ ಬೈನಾ ಚೀರ್ಚ್‌ನಲ್ಲಿರುವ ಕನ್ನಡಿಗರ ಭೇಟಿ, ಕನ್ನಡಿಗರ ಪ್ರಸ್ತುತ ಸಮಸ್ಯೆಗಳು ಹಾಗೂ ಸಾರ್ವಜನಿಕರ ಕುಂದು ಕೊರತೆಗಳ ಪರಿಶೀಲನೆ ನಡೆಸಲಿರುವ ಅವರು ಅಂದೇ ನಗರಕ್ಕೆ ಹಿಂದಿರುಗಲಿದ್ದಾರೆ.

ಪಲ್ಲವಿ:ಜಿಪಿಆರ್.

## ದೇಶದ ಮೊದಲ ಉರ್ದು ಸಂಚಾರಿ ಗ್ರಂಥಾಲಯಕ್ಕೆ ಮುಖ್ಯಮಂತ್ರಿ ಚಾಲನೆ

**ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ)**

ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಬಜೆಟ್‌ನಲ್ಲಿ ಮೀಸಲಿಟ್ಟಿರುವ ಹಣವನ್ನು ಪ್ರಸಕ್ತ ಹಣಕಾಸು ವರ್ಷದಲ್ಲಿಯೇ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಖರ್ಚು ಮಾಡಲಾಗುವುದು ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಧಾನ ಸೌಧದ ಮುಂಭಾಗದಲ್ಲಿ ಕರ್ನಾಟಕ ಉರ್ದು ಅಕಾಡೆಮಿ ಇಂದು ಏರ್ಪಡಿಸಿದ್ದ ಉರ್ದು ಸಂಚಾರಿ ಗ್ರಂಥಾಲಯಕ್ಕೆ ಚಾಲನೆ ನೀಡಿ ಮಾತನಾಡಿದ ಮುಖ್ಯಮಂತ್ರಿ ಅವರು ಉರ್ದು ಸಾಹಿತ್ಯವನ್ನು ಹಾಗೂ ಸಾಧುಸಂತರು, ಸಮಾಜ ಸುಧಾರಕರು ಮತ್ತು ಇತಿಹಾಸ ತಜ್ಞರ ವಿಚಾರಗಳನ್ನು ಜನರ ಮನೆ ಬಾಗಿಲಿಗೆ

ತಲುಪಿಸುವ ಕೆಲಸವನ್ನು ಉರ್ದು ಅಕಾಡೆಮಿ ಮಾಡುತ್ತಿದ್ದು, ಇದು ದೇಶದಲ್ಲಿಯೇ ಮೊದಲ ಪ್ರಯತ್ನವಾಗಿದೆ ಎಂದರು.

ಉರ್ದು ಸಂಚಾರಿ ಗ್ರಂಥಾಲಯವು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಉರ್ದು ಭಾಷಿಕರಿಗೆ ಓದಲು ಪುಸ್ತಕಗಳನ್ನು ಹಾಗೂ ಪುಸ್ತಕಗಳನ್ನು ಖರೀದಿಸಲು ಅವಕಾಶ ಕಲ್ಪಿಸಲಿದೆ ಎಂದು ಮಾತನಾಡಿದ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಉರ್ದು ಅಕಾಡೆಮಿ ಉತ್ತಮ ಪುಸ್ತಕಗಳನ್ನು ಪ್ರಕಟಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ಉರ್ದು ಸಂಚಾರಿ ಗ್ರಂಥಾಲಯಕ್ಕೆ ಚಾಲನೆಯಾದ ನಂತರ ಮಾತನಾಡಿದ ಪೌರಾಡಳಿತ, ಅಲ್ಪಸಂಖ್ಯಾತರು ಹಾಗೂ ವಕ್ಫ್ ಸಚಿವರೂ ಆದ ಶ್ರೀ ಖಮರುಲ್ ಇಸ್ಲಾಂ ಅವರು ಈ ಸಂಚಾರಿ ಗ್ರಂಥಾಲಯವು ಚಾಮರಾಜನಗರದಿಂದ ಬೀದರ್‌ವರೆಗೆ ಸಂಚರಿಸಲಿದ್ದು ಉರ್ದು ಸಾಹಿತ್ಯವನ್ನು ಉರ್ದು ಭಾಷಿಕರಿಗೆ ತಲುಪಿಸುವ ಕೆಲಸ ಮಾಡುತ್ತದೆ ಎಂದರು. ದೇಶದಲ್ಲೇ ಉರ್ದು ಸಂಚಾರಿ ಗ್ರಂಥಾಲಯವನ್ನು ಕರ್ನಾಟಕದಲ್ಲಿ ಪ್ರಾರಂಭಿಸಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಕರ್ನಾಟಕ ಉರ್ದು ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಫೌಜೀಯ ಚೌದರಿ, ರಿಜಿಸ್ಟ್ರಾರ್ ಫಯಿದ ರಹೀಂ ಅವರು ಸೇರಿದಂತೆ ಗಣ್ಯರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಪಲ್ಲವಿ/ಕೆಪಿಪಿ/ಕೆಎಂ

## ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ)

ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವ ಶ್ರೀ ಟಿ. ಬಿ ಜಯಚಂದ್ರ ಅವರು ಸೆಪ್ಟೆಂಬರ್ 29 ರಂದು ತುಮಕೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.

ಪಲ್ಲವಿ/ಕೆಎಂ